**Akashvani : Bangalore**
**National Bulletin In Kannada**
**05.10.2024 / 19.35 hrs**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

**೧. ಪ್ರಧಾನಿ ನರೇಂದ್ರ ಮೋದಿ ಮಹಾರಾಷ್ಟ್ರ ಪ್ರವಾಸ; ೨೩ ಸಾವಿರದ ೩೦೦ ಕೋಟಿ ರೂಪಾಯಿ ವೆಚ್ಚದ ಯೋಜನೆಗಳಿಗೆ ಚಾಲನೆ**

**೨. ಹರಿಯಾಣ ವಿಧಾನಸಭಾ ಚುನಾವಣೆ; ಮತದಾನ ಶಾಂತಿಯುತ**

**೩. ನಾಲ್ಕು ದಿನಗಳ ಭಾರತ ಪ್ರವಾಸಕ್ಕಾಗಿ ನಾಳೆ ಮಾಲ್ಡೀವ್ಸ್ ಅಧ್ಯಕ್ಷ ಮೊಹಮ್ಮದ್ ಮುಹಿಝು ಆಗಮನ**

**೪. ಏಷ್ಯನ್ ಯುವ ಬಿಲ್ಲುಗಾರಿಕೆ ಚಾಂಪಿಯನ್‌ಶಿಪ್; ಭಾರತದ ಮಹಿಳಾ ತಂಡಕ್ಕೆ ಬೆಳ್ಳಿ**

**೫. ಐಎಸ್‌ಎಸ್‌ಎಫ್ ಜೂನಿಯರ್ ಶೂಟಿಂಗ್ ವಿಶ್ವ ಚಾಂಪಿಯನ್‌ಶಿಪ್; ಪದಕ ಪಟ್ಟಿಯಲ್ಲಿ ಭಾರತಕ್ಕೆ ಅಗ್ರ ಸ್ಥಾನ**

**<><*<><>*><>**

ದೆಹಲಿಯಲ್ಲಿ ಇಂದು ನಡೆದ 'ಕಾನ್‌ಕ್ಲೇವ್ ೨೦೨೪' ಸಮಾವೇಶದಲ್ಲಿ ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಹಾಗೂ ಕೇಂದ್ರ ಸಚಿವ ಸರ್ಬಾನಂದ ಸೋನೋವಾಲ್ ಭಾಗವಹಿಸಿದ್ದರು. ಈಶಾನ್ಯ ಭಾರತದ ಪ್ರಮುಖ ವಿಷಯಗಳ ಕುರಿತು ಚರ್ಚಿಸಲು ಹಾಗೂ ಈ ಪ್ರದೇಶವನ್ನು ರಾಜಕೀಯ, ವ್ಯಾಪಾರ, ಶೈಕ್ಷಣಿಕ ಮತ್ತು ಮಾಧ್ಯಮದಂಥ ಕ್ಷೇತ್ರಗಳಲ್ಲಿ ಮುನ್ನಡೆಸುವ ನಿಟ್ಟಿನಲ್ಲಿ ಆಯೋಜಿಸಲಾಗಿರುವ ಈ ಸಮಾವೇಶದ ಕುರಿತು ಶ್ಲಾಘನೆ ವ್ಯಕ್ತಪಡಿಸಿದ ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್, ಈಶಾನ್ಯ ಭಾರತವು ಭಾರತದ ಹೃದಯ ಮತ್ತು ಆತ್ಮವಾಗಿದೆ. ಪ್ರಕೃತಿಯ ವರದಾನವಾಗಿದೆ ಎಂದು ಹೇಳಿದರು. ಭಾರತವು ಅತಿ ವೇಗದಲ್ಲಿ ಅಭಿವೃದ್ಧಿ ಹೊಂದುವ ಮೂಲಕ ವಿಶ್ವದ ಗಮನ ಸೆಳೆಯುತ್ತಿದೆ. ಪ್ರಧಾನಿ ನರೇಂದ್ರ ಮೋದಿ ಅವರು, 'ಲುಕ್ ಈಸ್ಟ್' ಉಪಕ್ರಮದಡಿ ಜಲಮಾರ್ಗಗಳು ಮತ್ತು ವಿಮಾನ ನಿಲ್ದಾಣಗಳ ಮೂಲಕ ಈ ಪ್ರದೇಶವನ್ನು ಅಭಿವೃದ್ಧಿಪಡಿಸಿದ್ದಾರೆ. ಈಶಾನ್ಯ ಭಾರತದ ಪ್ರತಿಯೊಂದು ರಾಜ್ಯವು ಪ್ರವಾಸಿಗರಿಗೆ ಸ್ವರ್ಗವಾಗಿದೆ ಎಂದು ಉಪರಾಷ್ಟ್ರಪತಿ ಹೇಳಿದರು. ಈಶಾನ್ಯ ಭಾರತ ಎದುರಿಸುತ್ತಿರುವ ಸವಾಲುಗಳ ಕುರಿತು ಚರ್ಚಿಸಿ, ಸಮಸ್ಯೆ ಪರಿಹರಿಸುವ ನಿಟ್ಟಿನಲ್ಲಿ ಏನೇನು ಕ್ರಮ ತೆಗೆದುಕೊಳ್ಳಬಹುದು ಎಂಬ ಬಗ್ಗೆ ಚಿಂತಿಸಬೇಕಾಗಿದೆ ಎಂದರು. ಅಲೆಮಾರಿ ಮತ್ತು ಬುಡಕಟ್ಟು ಸಮುದಾಯದ ಅಭಿವೃದ್ಧಿಗೆ ಕೇಂದ್ರ ಸರ್ಕಾರ ಬದ್ಧವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಮಹಾರಾಷ್ಟ್ರದ ಪ್ರವಾಸದಲ್ಲಿರುವ ಪ್ರಧಾನಿ ಅವರು, ಇಂದು ವಾಶಿಮ್‌ನಲ್ಲಿ ಕೃಷಿ ಮತ್ತು ಪಶುಸಂಗೋಪನೆ ಕ್ಷೇತ್ರಗಳಿಗೆ ಸಂಬಂಧಿಸಿದ ಸುಮಾರು ೨೩ ಸಾವಿರದ ೩೦೦ ಕೋಟಿ ರೂಪಾಯಿ ವೆಚ್ಚದ ಯೋಜನೆಗಳಿಗೆ ಚಾಲನೆ ನೀಡಿದರು.

ಬಳಿಕ ಬಂಜಾರ ಸಮುದಾಯದ ಶ್ರೀಮಂತ ಪರಂಪರೆಯನ್ನು ಪ್ರತಿಬಿಂಬಿಸುವ ಬಂಜಾರಾ ವಿರಾಸತ್ ಸಂಗ್ರಹಾಲಯವನ್ನು ಉದ್ಘಾಟಿಸಿ, ಸಂಗ್ರಹಾಲಯವನ್ನು ವೀಕ್ಷಿಸಿದರು. ಇದಕ್ಕೂ ಮುನ್ನ ಅವರು, ಜಗದಾಂಬಾ ಮಂದಿರದಲ್ಲಿ ಪೂಜೆ ನೆರವೇರಿಸಿದರು. ನಂತರ ಸಂತ ಸೇವಾಲಾಲ್ ಮಹಾರಾಜ್ ಮತ್ತು ಸಂತ ರಾಮಾರಾವ್ ಮಹಾರಾಜ್ ಸಮಾಧಿಗೆ ತೆರಳಿ ನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ಪ್ರಧಾನಿ ಅವರನ್ನು ಬಂಜಾರಾ ಸಮುದಾಯದ ಮುಖಂಡರು ಗೌರವಿಸಿದರು. ಬಳಿಕ ಪ್ರಧಾನಿ, ಪಿಎಂ ಕಿಸಾನ್ ಸಮ್ಮಾನ್ ನಿಧಿ ಯೋಜನೆಯ ೧೮ನೇ ಕಂತನ್ನು ಬಿಡುಗಡೆ ಮಾಡಿದರು. ಈ ಮೂಲಕ ದೇಶಾದ್ಯಂತ ೯.೪ ಕೋಟಿ ರೈತರ ಬ್ಯಾಂಕ್ ಖಾತೆಗಳಿಗೆ ನೇರ ಹಣ ವರ್ಗಾವಣೆಯಾಗಿದೆ.

**<><*<><>*><>**

ಸ್ವದೇಶಿ ವಸ್ತುಗಳನ್ನ ಖರೀದಿಸುವಂತೆ ಪ್ರೇರೇಪಿಸಿದ್ದ ಪ್ರಧಾನಿ ನರೇಂದ್ರ ಮೋದಿಯವರ ಕರೆಗೆ ಓಗೊಟ್ಟು ಗಾಂಧಿ ಜಯಂತಿಯಂದು ದಾಖಲೆ ಪ್ರಮಾಣದಲ್ಲಿ ನಾಗರಿಕರು ಖಾದಿ ಬಟ್ಟೆ ಖರೀದಿಸಿದ್ದಾರೆ. ಅಕ್ಟೋಬರ್ ೨ ರ ಒಂದೇ ದಿನದಂದು ನವದೆಹಲಿಯ ಖಾದಿ ಭವನದಲ್ಲಿ ೨ ಕೋಟಿ ೧ ಲಕ್ಷ ೩೭ ಸಾವಿರ ರೂಪಾಯಿ ಮೌಲ್ಯದ ಖಾದಿ ಬಟ್ಟೆ ಮಾರಾಟವಾಗಿದೆ. ಈ ಹೊಸ ದಾಖಲೆಯು ದೇಶವಾಸಿಗಳಲ್ಲಿ ಸ್ವದೇಶಿ ಪ್ರವೃತ್ತಿ ಎಷ್ಟು ವೇಗವಾಗಿ ಹೆಚ್ಚುತ್ತಿದೆ ಎಂಬುದಕ್ಕೆ ಸಾಕ್ಷಿಯಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಅಭಿಪ್ರಾಯಪಟ್ಟಿದ್ದಾರೆ.

**<><*<><>*><>**

ದೆಹಲಿಯಲ್ಲಿ ಇಂದು ನಡೆದ 'ಕಾನ್‌ಕ್ಲೇವ್ ೨೦೨೪' ಸಮಾವೇಶದಲ್ಲಿ ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಹಾಗೂ ಕೇಂದ್ರ ಸಚಿವ ಸರ್ಬಾನಂದ ಸೋನೋವಾಲ್ ಭಾಗವಹಿಸಿದ್ದರು. ಈಶಾನ್ಯ ಭಾರತದ ಪ್ರಮುಖ ವಿಷಯಗಳ ಕುರಿತು ಚರ್ಚಿಸಲು ಹಾಗೂ ಈ ಪ್ರದೇಶವನ್ನು ರಾಜಕೀಯ, ವ್ಯಾಪಾರ, ಶೈಕ್ಷಣಿಕ ಮತ್ತು ಮಾಧ್ಯಮದಂಥ ಕ್ಷೇತ್ರಗಳಲ್ಲಿ ಮುನ್ನಡೆಸುವ ನಿಟ್ಟಿನಲ್ಲಿ ಆಯೋಜಿಸಲಾಗಿರುವ ಈ ಸಮಾವೇಶದ ಕುರಿತು ಶ್ಲಾಘನೆ ವ್ಯಕ್ತಪಡಿಸಿದ ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್, ಈಶಾನ್ಯ ಭಾರತವು ಭಾರತದ ಹೃದಯ ಮತ್ತು ಆತ್ಮವಾಗಿದೆ. ಪ್ರಕೃತಿಯ ವರದಾನವಾಗಿದೆ ಎಂದು ಹೇಳಿದರು. ಭಾರತವು ಅತಿ ವೇಗವಾಗಿ ಅಭಿವೃದ್ಧಿ ಹೊಂದುವ ಮೂಲಕ ವಿಶ್ವದ ಗಮನ ಸೆಳೆಯುತ್ತಿದೆ. ಪ್ರಧಾನಿ ನರೇಂದ್ರ ಮೋದಿ ಅವರು, 'ಲುಕ್ ಈಸ್ಟ್' ಉಪಕ್ರಮದಡಿ ಜಲಮಾರ್ಗಗಳು ಮತ್ತು ವಿಮಾನ ನಿಲ್ದಾಣಗಳ ಮೂಲಕ ಈ ಪ್ರದೇಶವನ್ನು ಅಭಿವೃದ್ಧಿಪಡಿಸಿದ್ದಾರೆ. ಈಶಾನ್ಯ ಭಾರತದ ಪ್ರತಿಯೊಂದು ರಾಜ್ಯವು ಪ್ರವಾಸಿಗರಿಗೆ ಸ್ವರ್ಗವಾಗಿದೆ ಎಂದು ಉಪರಾಷ್ಟ್ರಪತಿ ಹೇಳಿದರು. ಈಶಾನ್ಯ ಭಾರತ ಎದುರಿಸುತ್ತಿರುವ ಸವಾಲುಗಳ ಕುರಿತು ಚರ್ಚಿಸಿ, ಸಮಸ್ಯೆ ಪರಿಹರಿಸುವ ನಿಟ್ಟಿನಲ್ಲಿ ಏನೇನು ಕ್ರಮ ತೆಗೆದುಕೊಳ್ಳಬಹುದು ಎಂಬ ಬಗ್ಗೆ ಚಿಂತಿಸಬೇಕಾಗಿದೆ ಎಂದರು.

**<><*<><>*><>**

ಹರಿಯಾಣದಲ್ಲಿ ೯೦ ವಿಧಾನಸಭಾ ಕ್ಷೇತ್ರಗಳಿಗೆ ಇಂದು ನಡೆದ ಒಂದೇ ಹಂತದ ಮತದಾನ ಶಾಂತಿಯುತವಾಗಿ ನಡೆಯಿತು. ಬೆಳಗ್ಗೆ ೭ ಗಂಟೆಗೆ ಆರಂಭವಾದ ಮತದಾನ ಸಂಜೆ ೬ ಗಂಟೆಗೆ ಮುಕ್ತಾಯವಾಯಿತು. ಸಂಜೆ ೫ ಗಂಟೆಯವರೆಗಿನ ವರದಿಯ ಪ್ರಕಾರ, ರಾಜ್ಯದಲ್ಲಿ ಶೇಕಡ ೬೧ ರಷ್ಟು ಮತದಾನವಾಗಿದೆ. ಒಟ್ಟು ೨೦ ಸಾವಿರದ ೬೩೨ ಮತಗಟ್ಟೆಗಳಲ್ಲಿ ನಡೆದ ಮತದಾನದಲ್ಲಿ, ೧ ಸಾವಿರದ ೩೧ ಅಭ್ಯರ್ಥಿಗಳ ಭವಿಷ್ಯ ಮತಪೆಟ್ಟಿಗೆಯಲ್ಲಿ ಭದ್ರವಾಗಿದೆ. ಇದೇ ೮ ರಂದು ಮತ ಎಣಿಕೆ ಕಾರ್ಯ ನಡೆಯಲಿದೆ.

**<><*<><>*><>**

ಬೆಂಗಳೂರಿನಲ್ಲಿ ಮೆಟ್ರೋ ರೈಲು, ಉಪನಗರ ರೈಲು ಹಾಗೂ ವಿಮಾನ ನಿಲ್ದಾಣಕ್ಕೆ ರೈಲು ಸಂಪರ್ಕ ಕಲ್ಪಿಸುವ ಮೂಲಕ ನಗರ ಸಂಚಾರ ದಟ್ಟಣೆ ಸುಧಾರಿಸಲಿದೆ ಎಂದು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಕಂಟೋನ್ಮೆಂಟ್ ರೈಲು ನಿಲ್ದಾಣದ ಆಧುನೀಕರಣ ಮತ್ತು ಪುನರ್ ನಿರ್ಮಾಣ ಯೋಜನೆಯ ಪ್ರಗತಿ ಪರಿಶೀಲನೆ ನಡೆಸಿದ ನಂತರ ಸುದ್ದಿಗಾರರಿಗೆ ಅವರು ಈ ವಿಷಯ ತಿಳಿಸಿದರು. ಬೆಂಗಳೂರಿಗೆ ವರ್ತುಲ ರೈಲಿನ ಅಗತ್ಯವಿದ್ದು, ಇದರ ಅನುಷ್ಠಾನಕ್ಕೆ ಅಗತ್ಯ ವಿಸ್ತೃತ ವರದಿ ಡಿಸೆಂಬರ್ ವೇಳೆಗೆ ಸಿದ್ಧವಾಗಲಿದೆ ಎಂದು ಅವರು ಹೇಳಿದರು. ಕಂಟೋನ್ಮೆಂಟ್ ರೈಲು ನಿಲ್ದಾಣ ಸಿದ್ದವಾದ ನಂತರ ಆಧುನಿಕ ಸೌಲಭ್ಯಗಳಿಂದ ಮತ್ತು ವ್ಯವಸ್ಥೆಗಳಿಂದ ಕೂಡಿರಲಿದ್ದು, ೧ ಸಾವಿರದ ೮೦೦ ಚದರ ಮೀಟರ್ ವಿಸ್ತೀರ್ಣದಲ್ಲಿ ನಿರ್ಮಾಣವಾಗಲಿದೆ. ಇದರಲ್ಲಿ ೨೫೦ ಕಾರುಗಳು ಮತ್ತು ೨೫೦ ದ್ವಿಚಕ್ರ ವಾಹನಗಳನ್ನು ನಿಲ್ಲಿಸುವ ಸಾಮರ್ಥ್ಯ ಹೊಂದಿರಲಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ಮಾಹಿತಿ ನೀಡಿದರು.

**<><*<><>*><>**

ಮಾಲ್ದೀವ್ಸ್ ಅಧ್ಯಕ್ಷ ಮೊಹಮದ್ ಮುಯಿಝು ಅವರು ನಾಳೆಯಿಂದ ಇದೇ ೧೦ ರವರೆಗೆ ಭಾರತ ಪ್ರವಾಸ ಕೈಗೊಳ್ಳಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ದೆಹಲಿಯಲ್ಲಿಂದು ತಿಳಿಸಿದ್ದಾರೆ. ಈ ಸಂದರ್ಭದಲ್ಲಿ ಬೆಂಗಳೂರು ಮತ್ತು ಮುಂಬೈಗೂ ಅವರು ಭೇಟಿ ನೀಡಲಿದ್ದಾರೆ. ಇದು ಭಾರತಕ್ಕೆ ಅವರ ಮೊದಲ ದ್ವಿಪಕ್ಷೀಯ ಭೇಟಿಯಾಗಿದೆ ಎಂದು ಹೇಳಿದರು. ಯುದ್ಧ ಪ್ರದೇಶಗಳಲ್ಲಿ ಇರುವ ಭಾರತೀಯರ ಸುರಕ್ಷತೆಯ ಕುರಿತು ಸುದ್ದಿಗಾರರ ಪ್ರಶ್ನೆಗೆ ಪ್ರತಿಕ್ರಿಯಿಸಿದ ರಣಧೀರ್ ಜೈಸ್ವಾಲ್, ಇಸ್ರೇಲ್, ಇರಾನ್ ಮತ್ತು ಇತರೆ ದೇಶಗಳಲ್ಲಿರುವ ಭಾರತೀಯರ ಸುರಕ್ಷತೆಗೆ ಆದ್ಯತೆ ನೀಡಲಾಗುತ್ತಿದೆ. ಈ ದೇಶಗಳಲ್ಲಿನ ಹಿಂಸಾಚಾರ ಪರಿಸ್ಥಿತಿಯು ಕಳವಳವನ್ನು ಉಂಟು ಮಾಡುತ್ತಿದೆ. ಸದ್ಯ ಈ ದೇಶಗಳಿಂದ ವಿಮಾನಗಳು ಸಂಚರಿಸುತ್ತಿರುವ ಹಿನ್ನೆಲೆಯಲ್ಲಿ ಅಲ್ಲಿ ವಾಸಿಸುತ್ತಿರುವವರಿಗೆ ಆಯ್ಕೆಗಳು ಇವೆ ಎಂದರು. ಲೆಬನಾನ್‌ನಲ್ಲಿ ಸುಮಾರು ೩ ಸಾವಿರ ಭಾರತೀಯರಿದ್ದು, ಅವರ ಪೈಕಿ ಹೆಚ್ಚಿನವರು ಬೈರುತ್‌ನಲ್ಲಿದ್ದಾರೆ. ಇರಾನ್‌ನಲ್ಲಿ ಹತ್ತು ಸಾವಿರ ಭಾರತೀಯರಿದ್ದು, ಅವರಲ್ಲಿ ಸುಮಾರು ಐದು ಸಾವಿರ ವಿದ್ಯಾರ್ಥಿಗಳೇ ಇದ್ದಾರೆ. ಇಸ್ರೇಲ್‌ನಲ್ಲಿ ಸುಮಾರು ೩೦ ಸಾವಿರ ಭಾರತೀಯರು ಇದ್ದು, ಅವರ ಕುಟುಂಬಗಳು ಈಗಾಗಲೇ ಭಾರತೀಯ ರಾಯಭಾರಿ ಕಚೇರಿಯನ್ನು ಸಂಪರ್ಕಿಸಿವೆ ಎಂದು ರಣಧೀರ್ ಜೈಸ್ವಾಲ್ ತಿಳಿಸಿದರು.

<><*<><>*><>

ಆಂಧ್ರಪ್ರದೇಶದ ವಿಶಾಖಪಟ್ಟಣದಲ್ಲಿ ಇದೇ ೮ ರಿಂದ ನೌಕಾ ಸಮರಾಭ್ಯಾಸ ಮಲ್ಬಾರ್-೨೦೨೪ ಆರಂಭವಾಗಲಿದೆ. ಈ ವರ್ಷ ಭಾರತ ಈ ಸಮಾರಾಭ್ಯಾಸವನ್ನು ಮುನ್ನಡಸಲಿದೆ. ಅಮೆರಿಕ, ಆಸ್ಟ್ರೇಲಿಯಾ ಮತ್ತು ಜಪಾನ್ ಈ ಸಮರಾಭ್ಯಾಸದಲ್ಲಿ ಪಾಲ್ಗೊಳ್ಳಲಿವೆ. ಈ ಸಮರಾಭ್ಯಾಸವು ವಿಶೇಷ ಕಾರ್ಯಾಚರಣೆಗಳು, ಮೇಲ್ಮೈ, ವಾಯು ಮತ್ತು ಜಲಾಂತರ್ಗಾಮಿ ವಿರೋಧಿ ಯುದ್ಧದ ಚರ್ಚೆಗಳನ್ನು ಒಳಗೊಂಡಂತೆ ಸಹಕಾರ ಮತ್ತು ಕಾರ್ಯಾಚರಣೆಯ ಸಾಮರ್ಥ್ಯಗಳನ್ನು ಹೆಚ್ಚಿಸಲು ವಿನ್ಯಾಸಗೊಳಿಸಲಾದ ಚಟುವಟಿಕೆಗಳ ಮೇಲೆ ಕೇಂದ್ರೀಕರಿಸುತ್ತದೆ. ಈ ವೇಳೆ ಕ್ಷಿಪಣಿ ವಿಧ್ವಂಸಕಗಳು, ಬಹುಪಯೋಗಿ ಯುದ್ಧ ನೌಕೆಗಳು, ಜಲಾಂತರ್ಗಾಮಿ ನೌಕೆಗಳು, ಯುದ್ಧ ವಿಮಾನಗಳು ಮತ್ತು ಹೆಲಿಕಾಪ್ಟರ್‌ಗಳು ಸೇರಿದಂತೆ ಭಾರತೀಯ ನೌಕಾಪಡೆಯ ಸಾಮರ್ಥ್ಯ ಅನಾವರಣಗೊಳ್ಳಲಿದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.

<><*<><>*><>

ಕೇಂದ್ರದ ನೂತನ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ್ ಜೋಶಿ ಅವರು ಮೂರು ದಿನಗಳ ಜರ್ಮನಿ ಪ್ರವಾಸವನ್ನು ನಾಳೆಯಿಂದ ಆರಂಭಿಸಲಿದ್ದಾರೆ. ಭೇಟಿಯ ಸಮಯದಲ್ಲಿ ಅವರು, ಎರಡು ದಿನಗಳ ಹ್ಯಾಂಬರ್ಗ್ ಸುಸ್ಥಿರತೆ ಸಮ್ಮೇಳನದಲ್ಲಿ ಭಾಗವಹಿಸಲಿದ್ದಾರೆ. ಸುಸ್ಥಿರ ಅಭಿವೃದ್ಧಿ, ಹಸಿರು ಜಲಜನಕ, ಕಡಿಮೆ ವೆಚ್ಚದ ಹಣಕಾಸು ಮತ್ತು ಸಂಪೂರ್ಣ ನವೀಕರಿಸಬಹುದಾದ ಇಂಧನ ಮೌಲ್ಯ ಸರಪಳಿಯಲ್ಲಿ ಸಹಕಾರವನ್ನು ಹೆಚ್ಚಿಸಲು ಸಚಿವರು, ಜರ್ಮನಿಯ ಉನ್ನತ ಅಧಿಕಾರಿಗಳೊಂದಿಗೆ ದ್ವಿಪಕ್ಷೀಯ ಸಭೆಗಳನ್ನು ನಡೆಸಲಿದ್ದಾರೆ.

<><*<><>*><>

ಮಹಾರಾಷ್ಟ್ರದ ಕೊಲ್ಹಾಪುರದ ಪ್ರವಾಸದಲ್ಲಿರುವ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಇಂದು ಛತ್ರಪತಿ ಶಿವಾಜಿ ಮಹಾರಾಜ್ ಅವರ ಪ್ರತಿಮೆಯನ್ನು ಅನಾವರಣಗೊಳಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಶಿವಾಜಿ ಮಹಾರಾಜರು ದೇಶಕ್ಕೆ ನೀಡಿದ ಕೊಡುಗೆ ಅನನ್ಯ. ಅವರ ಸಿದ್ಧಾಂತವನ್ನು ರಕ್ಷಿಸುವ ಜವಾಬ್ದಾರಿ ಎಲ್ಲರ ಮೇಲಿದೆ. ಶಿವಾಜಿ ಮಹಾರಾಜರ ಧ್ಯೇಯೋದ್ದೇಶಗಳನ್ನು ಕಾಪಾಡಿಕೊಂಡು, ಅದನ್ನು ಮುನ್ನಡಿಸಿಕೊಂಡು ಬರಲು ಕಾಂಗ್ರೆಸ್ ಹೋರಾಟ ಮಾಡುತ್ತಿದೆ. ಇದರ ಸಂಕೇತವಾಗಿ ಈ ಪ್ರತಿಮೆಯನ್ನು ಪ್ರತಿಷ್ಠಾಪನೆ ಮಾಡಲಾಗಿದೆ ಎಂದು ಹೇಳಿದರು.

<><*<><>*><>

ತೈವಾನ್ ರಾಜಧಾನಿ ತೈಪೆ ನಗರದಲ್ಲಿ ನಡೆಯುತ್ತಿರುವ ಏಷ್ಯನ್ ಯುವ ಬಿಲ್ಲುಗಾರಿಕೆ ಚಾಂಪಿಯನ್‌ಶಿಪ್-೨೦೨೪ರ ೧೮ ವರ್ಷದೊಳಗಿನ ಮಹಿಳೆಯರ ಗುಂಪು ವಿಭಾಗದಲ್ಲಿ ವೈಷ್ಣವಿ ಪವಾರ್ ನೇತೃತ್ವದ ಭಾರತೀಯ ಮಹಿಳಾ ತಂಡ ಬೆಳ್ಳಿ ಪದಕ ಗೆದ್ದಿದೆ. ವೈಷ್ಣವಿ ಪವಾರ್ ಅವರೊಂದಿಗೆ ಪ್ರಾಂಜಾಲ್ ತೋಲಿಯಾ ಮತ್ತು ಜನ್ನತ್ ತಂಡದಲ್ಲಿದ್ದಾರೆ. ದಕ್ಷಿಣ ಕೊರಿಯಾ ಮಹಿಳಾ ತಂಡವನ್ನು ಹಿಂದಿಕ್ಕಿ ಭಾರತೀಯ ಮಹಿಳಾ ತಂಡ ಈ ಸಾಧನೆ ಮಾಡಿದೆ.

<><*<><>*><>

ಪೆರುವಿನಲ್ಲಿ ನಡೆದ ಐಎಸ್‌ಎಸ್‌ಎಫ್ ಜೂನಿಯರ್ ವಿಶ್ವ ಚಾಂಪಿಯನ್‌ಶಿಪ್‌ನ ೨೫ ಮೀಟರ್ ಸ್ಟ್ಯಾಂಡರ್ಡ್ ಪಿಸ್ತೂಲ್ ಶೂಟಿಂಗ್ ವಿಭಾಗದಲ್ಲಿ ಭಾರತೀಯ ಶೂಟರ್ ದಿವಾಂಶಿ ಚಿನ್ನದ ಪದಕ ಗೆದ್ದಿದ್ದಾರೆ. ಈ ಮೂಲಕ ವೈಯಕ್ತಿಕ ವಿಭಾಗದಲ್ಲಿ ಅವರು ಎರಡನೇ ಚಿನ್ನದ ಪದಕ ಪಡೆದಿದ್ದಾರೆ. ಪುರುಷರ ಜೂನಿಯರ್ ಸ್ಟ್ಯಾಂಡರ್ಡ್ ಪಿಸ್ತೂಲ್ ವಿಭಾಗದಲ್ಲಿ ಸೂರಜ್ ಶರ್ಮಾ ಚಿನ್ನದ ಪದಕ ಹಾಗೂ ಮುಖೇಶ್ ನೆಲವಳ್ಳಿ ಕಂಚಿನ ಪದಕ ಗೆದ್ದಿದ್ದಾರೆ.

<><*<><>*><>

ಶಾರ್ಜಾದಲ್ಲಿಂದು ನಡೆಯುತ್ತಿರುವ ಮಹಿಳಾ ಟಿ-೨೦ ವಿಶ್ವಕಪ್ ಕ್ರಿಕೆಟ್ ಪಂದ್ಯದಲ್ಲಿ ಇಂಗ್ಲೆಂಡ್ ಮತ್ತು ಬಾಂಗ್ಲಾದೇಶ ಮುಖಾಮುಖಿಯಾಗಿವೆ. ಟಾಸ್ ಗೆದ್ದ ಇಂಗ್ಲೆಂಡ್ ಬ್ಯಾಟಿಂಗ್ ಆಯ್ಕೆ ಮಾಡಿಕೊಂಡಿದೆ. ಇದಕ್ಕೂ ಮುನ್ನ ನಡೆದ ಪಂದ್ಯದಲ್ಲಿ ಆಸ್ಟ್ರೇಲಿಯಾ ತಂಡ, ಬಾಂಗ್ಲಾದೇಶವನ್ನು ೭ ವಿಕೆಟ್‌ಗಳಿಂದ ಪರಾಭಗೊವಗೊಳಿಸಿತು.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <><*<>**